**All India Radio: Bangalore**
**Regional Bulletin In Kannada**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**29.03.2025 / 2.30 p.m.**

ಮುಖ್ಯಾಂಶಗಳು

1. ರಾಜ್ಯದ ಎಲ್ಲ ವಿಶ್ವವಿದ್ಯಾಲಯಗಳಲ್ಲಿ ಆರ್ಥಿಕ ಶಿಸ್ತಿಗೆ ವಿಶೇಷ ಆದ್ಯತೆ - ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ ಸುಧಾಕರ್
2. ಕಿತ್ತೂರು ರಾಣಿ ಚೆನ್ನಮ್ಮ ಸಮಾಧಿ ರಾಷ್ಟ್ರೀಯ ಸ್ಮಾರಕ ಎಂದು ಘೋಷಿಸುವಂತೆ ಪ್ರಧಾನಿಗೆ ಮುಖ್ಯಮಂತ್ರಿ ಪತ್ರ
3. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಯವ್ಯಯ ಮಂಡನೆ - ಬ್ರ್ಯಾಂಡ್ ಬೆಂಗಳೂರಿಗೆ ಒತ್ತು
4. ನಾಳೆ ಆಕಾಶವಾಣಿಯ ಜನಪ್ರಿಯ ಮಾಸಿಕ ಮನ್ ಕಿ ಬಾತ್‌ನ ೧೨೦ನೇ ಸಂಚಿಕೆ ಪ್ರಸಾರ
5. ಮನ್ರೇಗಾ ಯೋಜನೆಯಲ್ಲಿ ಶೇಕಡ ೧೦೦ ರಷ್ಟು ಗುರಿ ಸಾಧಿಸಿದ ಮೈಸೂರು ಜಿಲ್ಲಾ ಪಂಚಾಯಿತಿ

<><><><>

ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಆರ್ಥಿಕ ಮತ್ತು ಆಡಳಿತಾತ್ಮಕ ಶಿಸ್ತು ತರಲು ವಿಶೇಷ ಒತ್ತು ನೀಡಲಾಗಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್ ತಿಳಿಸಿದ್ದಾರೆ. ಮಂಗಳೂರು ವಿಶ್ವವಿದ್ಯಾನಿಲಯದ ೪೩ನೇ ಘಟಿಕೋತ್ಸವದಲ್ಲಿಂದು ಮಾತನಾಡಿದ ಅವರು, ರಾಜ್ಯದಲ್ಲಿನ ವಿಶ್ವವಿದ್ಯಾನಿಲಯಗಳ ಸ್ಥಿತಿ ಗತಿಗಳ ಬಗ್ಗೆ ಸಮಗ್ರ ಅಧ್ಯಯನ ನಡೆಯುತ್ತಿದ್ದು, ಶೀಘ್ರದಲ್ಲೇ ವರದಿಯನ್ನು ಮುಖ್ಯಮಂತ್ರಿಗಳಿಗೆ ಸಲ್ಲಿಸಲಾಗುವುದು ಎಂದು ಹೇಳಿದ್ದಾರೆ. ಪ್ರತಿಯೊಂದು ಶಿಕ್ಷಣ ಸಂಸ್ಥೆಗಳು ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ ನೀಡಬೇಕು ಎಂದು ಅವರು ಕರೆ ನೀಡಿದ್ದಾರೆ. ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಸುಮಾರು ೨ ಸಾವಿರದ ೮೦೦ ಬೋಧಕ ಹುದ್ದೆ ಖಾಲಿ ಇದ್ದು, ಹಂತ ಹಂತವಾಗಿ ಭರ್ತಿಮಾಡಲು ಒತ್ತು ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ. ಘಟಿಕೋತ್ಸವದಲ್ಲಿ ಒಟ್ಟು ೬೪ ಮಂದಿ ವಿದ್ಯಾರ್ಥಿಗಳಿಗೆ ಡಾಕ್ಟರೇಟ್ ಪದವಿ ಪ್ರದಾನ ಮಾಡಲಾಯಿತು. ಸಮಾಜ ಸೇವಾ ಕ್ಷೇತ್ರದ ಸಾಧನೆಗಾಗಿ ಎಂ.ಎನ್.ರಾಜೇಂದ್ರ ಕುಮಾರ್, ರೋಹನ್ ಮೊಂತೆರೋ ಮತ್ತು ಕನ್ಯಾನ ಸದಾಶಿವ ಶೆಟ್ಟಿ ಇವರುಗಳಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಲಾಯಿತು. ಘಟಿಕೋತ್ಸವದಲ್ಲಿ ೫೪ ಚಿನ್ನದ ಪದಕ ಮತ್ತು ೫೬ ನಗದು ಬಹುಮಾನ ವಿತರಿಸಲಾಯಿತು.

<><><><>

ಬೆಳಗಾವಿಯ ಬೈಲಹೊಂಗಲದಲ್ಲಿರುವ ವೀರರಾಣಿ ಕಿತ್ತೂರು ಚೆನ್ನಮ್ಮ ಸಮಾಧಿಯನ್ನು ರಾಷ್ಟ್ರೀಯ ಮಹತ್ವದ ಸ್ಮಾರಕವೆಂದು ಘೋಷಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದಾರೆ. ಭಾರತದ ಇತಿಹಾಸದಲ್ಲಿ ವಸಾಹತುಶಾಹಿ ಆಳ್ವಿಕೆಯ ವಿರುದ್ಧ ಸಶಸ್ತ್ರವಾಗಿ ಹೋರಾಡಿ ಮುನ್ನಡೆಸಿದ ಮೊದಲ ಮಹಿಳೆ ಕಿತ್ತೂರು ರಾಣಿ ಚೆನ್ನಮ್ಮ ಎಂದು ಪತ್ರದಲ್ಲಿ ತಿಳಿಸಿದ್ದಾರೆ. ಈಕೆಯ ಶೌರ್ಯ ಮತ್ತು ಅದಮ್ಯ ಚೈತನ್ಯ ಯುವ ಪೀಳಿಗೆಗೆ ಸ್ಫೂರ್ತಿ ಎಂದು ಹೇಳಿದ್ದಾರೆ. ಸಮಾಧಿ ಸ್ಥಳವನ್ನು ರಾಷ್ಟ್ರೀಯ ಸ್ಮಾರಕ ಎಂದು ಘೋಷಿಸುವುದರಿಂದ ಆಕೆಯ ಕೊಡುಗೆಯನ್ನು ದೇಶ ಗೌರವಿಸಿದಂತೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಈ ಕುರಿತಂತೆ ಕೇಂದ್ರ ಸಂಸ್ಕೃತಿ ಸಚಿವಾಲಯ ಮತ್ತು ಭಾರತಿಯ ಪುರಾತತ್ವ ಸಮೀಕ್ಷೆಗೆ ನಿರ್ದೇಶನ ನೀಡಬೇಕೆಂದು ಪ್ರಧಾನಿಯವರನ್ನು ಮುಖ್ಯಮಂತ್ರಿ ಒತ್ತಾಯಿಸಿದ್ದಾರೆ.

<><><><>

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ೨೦೨೫-೨೬ನೇ ಸಾಲಿನ ಆಯವ್ಯಯ ಅಂದಾಜುಗಳನ್ನು ಪುಟ್ಟಣ್ಣ ಚೆಟ್ಟಿ ಪುರಭವನದಲ್ಲಿಂದು ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಉಪಸ್ಥಿತಿಯಲ್ಲಿ ಮಂಡಿಸಲಾಯಿತು. ಹಣಕಾಸು ವಿಭಾಗದ ವಿಶೇಷ ಆಯುಕ್ತರಾದ ಡಾ. ಹರೀಶ್ ಕುಮಾರ್.ಕೆ ೧೯ ಸಾವಿರದ ೯೨೭ ಕೋಟಿ ರೂಪಾಯಿ

ಆಯವ್ಯಯ ಮಂಡಿಸಿದ್ದಾರೆ. ೪ ಸಾವಿರದ ೯೦೦ ಕೋಟಿ ತೆರಿಗೆ ಸಂಗ್ರಹಿಸುವುದರೊಂದಿಗೆ ಬಿಬಿಎಂಪಿ ಭಾರತದಲ್ಲೇ ಅತಿ ಹೆಚ್ಚು ತೆರಿಗೆ ಸಂಗ್ರಹಿಸಿದೆ. ಪಾಲಿಕೆಯ ಶಾಲೆಗಳು ಮತ್ತು ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ಒದಗಿಸುವ ಹಿನ್ನೆಲೆಯಲ್ಲಿ ಈ ಸಾಲಿನಲ್ಲಿ ಒಟ್ಟಾರೆ ೧೮೩ ಕೋಟಿ ೬೯ ಲಕ್ಷ ರೂಪಾಯಿ ಅನುದಾನ ಒದಗಿಸಲಾಗಿದೆ. ಈ ಬಾರಿ ಬ್ರ್ಯಾಂಡ್ ಬೆಂಗಳೂರಿಗೆ ಒತ್ತು ನೀಡಲಾಗಿದೆ. ಬ್ರ್ಯಾಂಡ್ ಬೆಂಗಳೂರು ಅಭಿಯಾನದಡಿ ಮುಂದಿನ ಎರಡು ವರ್ಷಗಳಲ್ಲಿ ೪೧೩ ಕೋಟಿ ವೆಚ್ಚದಲಿ ೧೯ ಆಸ್ಪತ್ರೆಗಳ ಹಾಸಿಗೆಗಳನ್ನು ಒಂದು ಸಾವಿರದ ೧೨೨ಕ್ಕೆ ಹೆಚ್ಚಿಸಲು ನಿರ್ಧರಿಸಲಾಗಿದೆ. ಇದರೊಂದಿಗೆ ೨೬ ಹೊಸ ಕೇಂದ್ರಗಳಲ್ಲಿ ದಂತ ಚಿಕಿತ್ಸಾ ಕೇಂದ್ರಗಳನ್ನು ಒದಗಿಸಲು ನಿರ್ಧರಿಸಲಾಗಿದೆ. ಸ್ವಚ್ಛ ಬೆಂಗಳೂರು ಕಾರ್ಯಯೋಜನೆ ಅಡಿಯಲ್ಲಿ ಮುಂದಿನ ೩೦ ವರ್ಷಗಳವರೆಗೆ ಸಮಗ್ರ ತ್ಯಾಜ್ಯ ನಿರ್ವಹಣೆಗೆ ೧೦೦ ಎಕರೆ ಪ್ರದೇಶದಲ್ಲಿ ತ್ಯಾಜ್ಯ ವಿಲೇವಾರಿ ಮಾಡುವುದನ್ನು ಕಾರ್ಯರೂಪಕ್ಕೆ ತರಲು ನಿರ್ಧರಿಸಲಾಗಿದೆ. ಬೆಂಗಳೂರಿನ ನಗರ ಸಂಚಾರ ದಟ್ಟಣೆ ಸುಗಮಗೊಳಿಸಲು ೮೮೦ ಕೋಟಿ ರೂಪಾಯಿ ಹಂಚಿಕೆ ಮಾಡಲಾಗಿದೆ.

<><><><>

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೦ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಅಲ್ಲದೇ, ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರವಾಗಲಿದೆ.

<><><><>

ಕೃಷ್ಣಾ ಮೇಲ್ದಂಡೆ ಮುಳವಾಡ ಏತನೀರಾವರಿ ಯೋಜನೆ ಹಂತ-೩ ರಲ್ಲಿ ಬರುವ ಬಬಲೇಶ್ವರ ಶಾಖಾ ಕಾಲುವೆಯ ೫ಎ, ೫ಬಿ ಲಿಫ್ಟ್ ಕಾಮಗಾರಿಗಳಿಗೆ ೧೨೭ ಕೋಟಿ ಹಾಗೂ ಲ್ಯಾಟರಲ್ ಕಾಲುವೆಗಳಿಗೆ ೧೦೮ ಕೋಟಿ ರೂಪಾಯಿ ಮೊತ್ತದ ಕಾಮಗಾರಿಗಳಿಗೆ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದೆ. ಶೀಘ್ರದಲ್ಲಿಯೇ ರೈತ ಸಮಾವೇಶ ನಡೆಸಿ ಈ ಮೂರು ಕಾಮಗಾರಿಗಳಿಗೆ ಚಾಲನೆ ನೀಡಲಾಗುವುದು ಎಂದು ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ಮುಳವಾಡ ಏತನೀರಾವರಿ ಯೋಜನೆ ಹಂತ-೩ ರ ಮೂಲಕ ಬಬಲೇಶ್ವರ ಹಾಗೂ ಸುತ್ತಲಿನ ಪ್ರದೇಶಕ್ಕೆ ಮಲಘಾಣ ಪಶ್ಚಿಮ ಕಾಲುವೆ ಹಾಗೂ ಬಬಲೇಶ್ವರ ಶಾಖಾ ಕಾಲುವೆಗಳ ಮೂಲಕ ಈಗಾಗಲೇ ನೀರಾವರಿ ಸೌಕರ್ಯ ಕಲ್ಪಿಸಲಾಗಿದೆ.  ಬಬಲೇಶ್ವರ ಶಾಖಾ ಕಾಲುವೆಯ ೫ಎ, ೫ಬಿ ಮತ್ತು ವಿತರಣಾ ಸಂಖ್ಯೆ ೧೫ ಹಾಗೂ ಲ್ಯಾಟರಲ್ ಕಾಲುವೆಯ ಮೂರು ಕಾಮಗಾರಿಗಳಿಂದ ಬಬಲೇಶ್ವರ ತಾಲೂಕಿನ ೨೬ ಸಾವಿರ ಎಕರೆ ಪ್ರದೇಶಕ್ಕೆ ನೀರು ಹರಿಸಲು ಸಾಧ್ಯವಾಗಲಿದೆ ಎಂದು ಸಚಿವ ಎಂ.ಬಿ.ಪಾಟೀಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><><>

ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಮೂಲಕ ಉದ್ಯೋಗ ಕ್ರಾಂತಿ ನಡೆಸಲು ಮುಂದಾಗಿರುವ ಮೈಸೂರು ಜಿಲ್ಲಾ ಪಂಚಾಯಿತಿ ಮಾನವ ದಿನಗಳಲ್ಲಿ ಶೇಕಡ ೧೦೦ರಷ್ಟು ಗುರಿ ಸಾಧಿಸಿದೆ. ಗ್ರಾಮೀಣ ಭಾಗದ ಜನರ ಜೀವನಕ್ಕೆ ಬಲವಾಗಿ ನಿಂತಿರುವ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯು ೨೦೨೪-೨೫ನೇ ಸಾಲಿನಲ್ಲಿ ಶೇ.೧೦೧.೮೩ ರಷ್ಟು ಗುರಿ ಸಾಧಿಸಿದೆ. ಜಿಲ್ಲೆಯಲ್ಲಿ ೩ ಲಕ್ಷದ ೩೮ ಸಾವಿರದ ೯೭೩ ಲಕ್ಷ ಕುಟುಂಬಗಳಿಗೆ ಜಾಬ್ ಕಾರ್ಡ್ ವಿತರಿಸಲಾಗಿದೆ. ಇವುಗಳಲ್ಲಿ ೧ ಲಕ್ಷ ೪೬ ಸಾವಿರದ ೩೬೮ ಕುಟುಂಬಗಳ ಜಾಬ್ ಕಾರ್ಡ್‌ಗಳು ಸಕ್ರಿಯವಾಗಿದ್ದು, ೨೭ ಲಕ್ಷ ೭ ಸಾವಿರದ ೩೭೯ ಫಲಾನುಭವಿಗಳು ಇದರ

ಪ್ರಯೋಜನ ಪಡೆದುಕೊಂಡಿದ್ದಾರೆ. ಜಿಲ್ಲೆಯ ಕೃಷ್ಣರಾಜನಗರ ತಾಲ್ಲೂಕು ಶೇಕಡ ೧೧೯.೫೯ ರಷ್ಟು ನಿಗದಿತ ಗುರಿ ಮೀರಿದ ಸಾಧನೆ ಮಾಡಿ ಜನಮೆಚ್ಚುಗೆಯ ಪ್ರಶಂಸೆಗೆ ಪಾತ್ರವಾಗಿದೆ. ಈ ತಾಲೂಕಿನಲ್ಲಿ ಒಟ್ಟು ೧೫ ಲಕ್ಷ ೧ ಸಾವಿರದ ೮೪ ಮಾನವ ದಿನ ಸೃಜನೆ ಗುರಿ ಹೊಂದಲಾಗಿದ್ದು, ಇದರಲ್ಲಿ ೧೮ ಲಕ್ಷ ೬೭೮ ಮಾನವ ದಿನಗಳನ್ನು ಪೂರ್ತಿಗೊಳಿಸಿ ದಾಖಲೆ ಬರೆದಿದೆ.

<><><><>

ಉಪ ಲೋಕಾಯುಕ್ತ ವೀರಪ್ಪ ಅವರು ಏಪ್ರಿಲ್ ೨೨ ರಿಂದ ೨೬ ರವರೆಗೆ ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಂಡಿದ್ದು, ಸಾರ್ವಜನಿಕರ ಅಹವಾಲು ಸ್ವೀಕರಿಸಲಿದ್ದಾರೆ ಎಂದು ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾರ್ವಜನಿಕರು ಸರ್ಕಾರಿ ಇಲಾಖೆಗಳಿಗೆ ಸಂಬಂಧಿಸಿದಂತೆ ಯಾವುದೇ ಅರ್ಜಿಗಳನ್ನು ಬಾಕಿ ಇಟ್ಟಿರುವ ಬಗ್ಗೆ ಹಾಗೂ ಸೌಲಭ್ಯ, ಸೇವೆ ಒದಗಿಸುವಲ್ಲಿ ವಿಳಂಬ, ತಾರತಮ್ಯ ಮಾಡಿದ್ದಲ್ಲಿ ದೂರು, ಅಹವಾಲು ಸಲ್ಲಿಸಬಹುದು ಎಂದು ಹೇಳಿದ್ದಾರೆ.

<><><><>

ಕಾರವಾರದ ಸಿಬರ್ಡ್ ನಿರಾಶ್ರಿತರಿಗೆ ೨೦೦೮-೦೯ ರಿಂದ ಬಾಕಿ ಉಳಿದಿದ್ದ ೨೮/೭ ಕೇಸ್ ನಲ್ಲಿ ಕೇಂದ್ರ ಸರ್ಕಾರದಿಂದ ೧೦ ಕೋಟಿ ೪೭ ಲಕ್ಷ ರೂಪಾಯಿ ಪರಿಹಾರ ಮಂಜೂರಾಗಿದೆ ಎಂದು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ. ಸಿಬರ್ಡ್ ಯೋಜನೆ ಅಡಿಯಲ್ಲಿ ಸೇನಾ ನೆಲೆ ನಿರ್ಮಾಣಕ್ಕಾಗಿ ನೂರಾರು ಕುಟುಂಬಗಳನ್ನು ಸ್ಥಳಾಂತರಿಸಲಾಗಿತ್ತು. ಬಳಿಕ ಸೂಕ್ತ ಪರಿಹಾರ ನೀಡುವ ಪ್ರಕ್ರಿಯೆ ವಿಳಂಬವಾಗಿದ್ದು, ಅನೇಕ ಕುಟುಂಬಗಳು ಆರ್ಥಿಕ ಸಂಕಷ್ಟ ಅನುಭವಿಸುತ್ತಿದ್ದವು. ಅಮದಳ್ಳಿ, ಕೊಡಾರ, ಹಟ್ಟಿಕೇರಿ, ಬಿಣಗಾ, ಚೆಂಡಿಯಾ, ಬಿರಾಡೆ ಗ್ರಾಮಗಳ ಕೆಲವು ನಿರಾಶ್ರಿತರು ಪರಿಹಾರಕ್ಕಾಗಿ ಆಗ್ರಹಿಸಿದ್ದರು. ೫೭ ಪ್ರಕರಣಗಳಿಗೆ ಪರಿಹಾರ ಸಿಕ್ಕಿದ್ದು, ಶೀಘ್ರವೇ ಅವರ ಖಾತೆಗಳಿಗೆ ನಗದು ಜಮಾ ಆಗಲಿದೆ. ಪರಿಹಾರ ಮಂಜೂರು ಮಾಡಿದ ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ರಕ್ಷಣಾ ಸಚಿವ ರಾಜನಾಥ ಸಿಂಗ್ ಅವರನ್ನು ಸಂಸದ ಕಾಗೇರಿ ಅಭಿನಂದಿಸಿದ್ದಾರೆ.

<><><><>

ನಾಳೆ ವಿಶ್ವಾವಸು ಸಂವತ್ಸರದ ಯುಗಾದಿ ಸ್ವಾಗತಕ್ಕೆ ರಾಜ್ಯದೆಲ್ಲೆಡೆ ಭರದ ಸಿದ್ಧತೆಗಳು ನಡೆಯುತ್ತಿವೆ. ರಾಜಧಾನಿ ಬೆಂಗಳೂರಿನಲ್ಲಿ ಹಬ್ಬದ ಖರೀದಿ ಜೋರಾಗಿದೆ. ಹೂವು, ಹಣ್ಣು, ಮಾವು, ಬೇವು ಖರೀದಿಯಲ್ಲಿ ಜನ ನಿರತರಾಗಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿಯೂ ಸಾರ್ವಜನಿಕರು ಹಬ್ಬಕ್ಕೆ ಬೇಕಾದ ಅಗತ್ಯ ವಸ್ತುಗಳ ಖರೀದಿಯಲ್ಲಿ ತೊಡಗಿರುವ ದೃಶ್ಯ ಸಾಮಾನ್ಯವಾಗಿದೆ. ಬಿಸಿಲಿನ ಧಗೆಯನ್ನು ಲೆಕ್ಕಿಸದೇ ಜನತೆ ಯುಗಾದಿಯ ಸ್ವಾಗತಕ್ಕೆ ಸಿದ್ಧತೆಯಲ್ಲಿ ತೊಡಗಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>